## ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:** ಶ್ರೀ ಎ.ಕೆ. ಮುಲ್ಲಾ, ನಿವೃತ್ತ ಜಿಲ್ಲಾ ಮತ್ತು ಸತ್ರ ನ್ಯಾಯಧೀಶರು ಹಾಗೂ ವಿಚಾರಣಾಧಿಕಾರಿಗಳು, ಬೆಳಗಾವಿ, ಇವರಿಗೆ ಸಂಭಾವನೆ ಮಂಜೂರು ಮಾಡುವ ಬಗ್ಗೆ ಆದೇಶ.

**ಓದಲಾಗಿದೆ:**
1. ಸರ್ಕಾರದ ಆದೇಶ ಸಂಖ್ಯೆ: ಸಿಆಸುಇ 11 ಸೇಇವಿ 2019, ದಿನಾಂಕ: 24.10.2019.
2. ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 01 ಇಎನ್ ಕ್ಯೂ 2020 ದಿನಾಂಕ: 19.06.2020.
3. ವಿಚಾರಣಾಧಿಕಾರಿಯವರ ವಿಚಾರಣಾ ವರದಿ ದಿನಾಂಕ: 29.03.2021.

**ಪ್ರಸ್ತಾವನೆ:**

ಇಲಾಖಾ ವಿಚಾರಣೆ ಪ್ರಕರಣದಲ್ಲಿ ಇಬ್ಬರಿಂದ ಐದು ಆರೋಪಿತ ವ್ಯಕ್ತಿಗಳಿಂದ ಇಲಾಖಾ ವಿಚಾರಣೆಯಲ್ಲಿ ವಿಚಾರಣಾಧಿಕಾರಿಯಾಗಿ ನೇಮಕವಾಗುವ ನಿವೃತ್ತ ಜಿಲ್ಲಾ ನ್ಯಾಯಧೀಶರಿಗೆ ವಾಹನ ಭತ್ಯೆಯೂ ಸೇರಿದಂತೆ ಒಟ್ಟು ರೂ. 40,000-00 ಗಳ ಸಂಭಾವನೆಯನ್ನು ಪಾವತಿಸಲು ಮೇಲೆ ಕ್ರಮಾಂಕ (1) ರಲ್ಲಿ ಓದಲಾದ ದಿನಾಂಕ: 24.10.2019ರ ಸರ್ಕಾರದ ಆದೇಶದಲ್ಲಿ ತಿಳಿಸಲಾಗಿದೆ.

ಬಾಗಲಕೋಟೆ ಜಿಲ್ಲೆ ಮುಧೋಳ ತಾಲ್ಲೂಕಿನ ಮೆಟಗುಡ್ಡ ಮತ್ತು ಇತರೆ 07 ಗ್ರಾಮಗಳಿಗೆ ಸಂಬಂಧಿಸಿದಂತೆ ಕೈಗೊಳ್ಳಲಾದ ಬಹುಗ್ರಾಮ ಕುಡಿಯುವ ನೀರು ಸರಬರಾಜು ಯೋಜನೆಯು ಸಫಲವಾಗದೇ ಸದರಿ ಯೋಜನೆಗೆ ಖರ್ಚು ಮಾಡಲಾದ ಬೃಹತ ಪ್ರಮಾಣದ ವೆಚ್ಚವು ನಿರರ್ಥಕವಾಗಿ ಸರ್ಕಾರಕ್ಕೆ ಆರ್ಥಿಕ ನಷ್ಟ ಉಂಟು ಮಾಡಿರುವ ಆರೋಪಕ್ಕೆ ಸಂಬಂಧಿಸಿದಂತೆ ಒಟ್ಟು 03 ಅಧಿಕಾರಿಗಳ ವಿರುದ್ಧ ಕರ್ನಾಟಕ ನಾಗರಿಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಗಳು, 1957 ರ ನಿಯಮ 11 ರನ್ವಯ ವಿವರವಾದ ಜಂಟಿ ಇಲಾಖಾ ವಿಚಾರಣೆಯನ್ನು ನಡೆಸಲು ಶ್ರೀ ಎ.ಕೆ.ಮುಲ್ಲಾ, ನಿವೃತ್ತ ಹೆಚ್ಚುವರಿ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು, ಬೆಳಗಾವಿ ಇವರನ್ನು ಮೇಲೆ ಕ್ರಮಾಂಕ (2) ರಲ್ಲಿ ಓದಲಾದ ದಿನಾಂಕ:19.06.2020 ರ ಆದೇಶದಲ್ಲಿ ವಿಚಾರಣಾಧಿಕಾರಿಯನ್ನಾಗಿ ನೇಮಿಸಲಾಗಿತ್ತು.

ವಿಚಾರಣಾಧಿಕಾರಿಗಳು ಇಲಾಖಾ ವಿಚಾರಣೆ ಜರುಗಿಸಿ ಮೇಲೆ ಕ್ರಮಾಂಕ (3) ರಲ್ಲಿ ಓದಲಾದಂತೆ ದಿ:29.03.2021 ರಂದು ವಿಚಾರಣಾ ವರದಿ ಸಲ್ಲಿಸಿರುತ್ತಾರೆ. ಆದುದರಿಂದ, ವಿಚಾರಣಾಧಿಕಾರಿಯವರಿಗೆ ನಿಯಮಾನುಸಾರ ಸಂಭಾವನೆ/ಭತ್ಯೆ ಮಂಜೂರು ಮಾಡಲು ಸರ್ಕಾರವು ತೀರ್ಮಾನಿಸಿದೆ. ಆದ್ದರಿಂದ ಈ ಆದೇಶ.

**ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 01 ಇಎನ್ ಕ್ಯೂ 2020**
**ಬೆಂಗಳೂರು ದಿನಾಂಕ: 08.03.2022.**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನಲೆಯಲ್ಲಿ ಶ್ರೀ ಎ.ಕೆ. ಮುಲ್ಲಾ, ನಿವೃತ್ತ ಜಿಲ್ಲಾ ಮತ್ತು ಸತ್ರ ನ್ಯಾಯಧೀಶರು ಹಾಗೂ ವಿಚಾರಣಾಧಿಕಾರಿಗಳು, ಬೆಳಗಾವಿ, ಇವರು ಸರ್ಕಾರದ ಆದೇಶದಂತೆ ಇಲಾಖಾ ವಿಚಾರಣೆ ವರದಿ ಸಲ್ಲಿಸಿರುವುದರಿಂದ ಸರ್ಕಾರದ ಅದೇಶ ಸಂಖ್ಯೆ:ಸಿಆಸುಇ 11 ಸೇಇವಿ 2019 ದಿನಅಂಕ:24.10.2019ರ ಅನುಸಾರ ಸಂಚಿತ ಸಂಭಾವನೆ ರೂ. 40,000-00 {(ನಲವತ್ತು ಸಾವಿರ ರೂ.ಗಳು ಮಾತ್ರ) / (ವಾಹನ ಭತ್ಯೆಯೂ ಸೇರಿದಂತೆ)} ಗಳನ್ನು ಮಂಜೂರು

ಮಾಡಿದೆ. ಸದರಿ ಮೊತ್ತವನ್ನು ಪಾವತಿಸಲು ಕೂಡಲೇ ಕ್ರಮವಹಿಸುವಂತೆ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್, ಬಾಗಲಕೋಟೆ ಇವರಿಗೆ ಸೂಚಿಸಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ

8/3

**(ಕೆ.ನದೀಮ್ ಅಹ್ಮದ್)**
ಸರ್ಕಾರದ ಅಧೀನ ಕಾರ್ಯದರ್ಶಿ (ಸೇವೆಗಳು-ಎ)
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ

**ಇವರಿಗೆ:**

1. ಮಹಾಲೇಖಪಾಲರು, (ಅ ಮತ್ತು ಇ) ಕರ್ನಾಟಕ, ಬೆಂಗಳೂರು.
2. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್, ಬಾಗಲಕೋಟೆ – ಸದರಿ ವಿಚಾರಣಾಧಿಕಾರಿಯವರ ಹೆಸರಿಗೆ ಚೆಕ್ಕು ಬರೆದು ಅವರ ವಿಳಾಸಕ್ಕೆ ನೋಂದಣಿ ಅಂಚೆ ಮುಖಾಂತರ ಕಳುಹಿಸುವಂತೆ ಕೋರಿದೆ.
3. ಶ್ರೀ ಎ.ಕೆ. ಮುಲ್ಲಾ, ನಿವೃತ್ತ ಜಿಲ್ಲಾ ಮತ್ತು ಸತ್ರ ನ್ಯಾಯಧೀಶರು, ವಿ:ಸಿ.ಟಿ.ಎಸ್. ನಂ.10230/ಎ&ಬಿ ಶಿವಾಜಿನಗರ, ಬೆಳಗಾವಿ.
4. ಗ್ರಾ.ಅ.ಪಂ.ರಾಜ್ ಇಲಾಖೆಯ ಪ್ರಧಾನ ಕಾರ್ಯದರ್ಶಿ/ಜಂಟಿ ಕಾರ್ಯದರ್ಶಿ (ಆಡಳಿತ-1) ಇವರ ಆಪ್ತ ಕಾರ್ಯದರ್ಶಿ/ಆಪ್ತ ಸಹಾಯಕರು.
5. ಶಾಖಾ ರಕ್ಷಾ ಕಡತ / ಹೆಚ್ಚುವರು ಪ್ರತಿಗಳು.